C.R.P.67

Form No.4
(Criminal)
Deposition
Sheets
(R.P.No.57)

# 5 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ಮಂಡ್ಯ

## ಸ್ಪೆಷಲ್ ಕೇಸ್ ನಂಬರ್ಃ 239/2028

ಚಾ.ಸಾ.–20 ಪ್ರಾ.ಸಾ.–15

| | |
|---|---|
| ಸಾಕ್ಷಿದಾರರ ಹೆಸರು | ಯೋಗೇಂದ್ರನಾಥ |
| ತಂದೆಯ ಹೆಸರು | ಕೆ ಮಾದಯ್ಯ |
| ವಯಸ್ಸು | 62 ವರ್ಷಗಳು |
| ಉದ್ಯೋಗ | ನಿವೃತ್ತ ಪೊಲಿಸ್ ವರಿಷ್ಠಾಧಿಕಾರಿಗಳು |
| ವಾಸ | ಬೆಂಗಳೂರು |

**ದಿನಾಂಕಃ 20.06.2026 ರಂದು ಪ್ರಮಾಣವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಿಶೇಷ ಸರ್ಕಾರಿ ಅಭಿಯೋಜಕರವರಿಂದ**

1. ನಾನು ದಿಃ 5.3.2018 ರಿಂದ 18.11.2019 ರವರಗೆ ಶ್ರೀರಂಗಪಟ್ಟಣ ಉಪವಿಭಾಗದಲ್ಲಿ ಪೋಲೀಸ್ ಉಪಾಧೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ7.3.2018 ರಂದು ಈ ಪ್ರಕರಣದ ಕಡತವನ್ನು ಚಾಸಾ– 19 ರವರಿಂದ ಪಡೆದುಕೊಂಡು ತನಿಖೆ ಮುಂದುವರೆಸಿದ್ದೇನೆ. ಗಾಯಾಳುಗಳ ಗಾಯದ ಪ್ರಮಾಣಪತ್ರವನ್ನು ವೈದ್ಯರಿಂದ ಪಡೆದುಕೊಂಡಿದ್ದೇನೆ. ಅವು ಈಗಾಗಲೆ ನಿಪಿ 17 , 18 ಆಗಿರುತ್ತವೆ. ಅದರಲ್ಲಿ ನನ್ನ ಸಹಿ ಇದೆ. ಸಾಕ್ಷಿ ಸಹಿಯನ್ನು ನಿಪಿ 17 ಬಿ , 18 ಬಿ ಎಂದು ಗುರುತಿಸಲಾಯಿತು. ನಂತರ ತನಿಖೆ ಮುಗಿದಿದ್ದರಿಂದ ದಿಃಃ 24.3.2018 ರಂದು ಆರೋಪಪಟ್ಟಿ ಸಲ್ಲಿಸಿದ್ದೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ ಎಸ್ ಎನ್ ವಕೀಲರಿಂದ:**

3. ನಾನು ಚಾಸಾ 1 , 2 ರವರ ಗಾಯದಪ್ರಮಾಣ ಪತ್ರವನ್ನು ಸಂಪೂರ್ಣವಾಗಿ ಪರಿಶೀಲಿಸಿದ್ದೇನೆ. ಚಾಸಾ 1 , 2 ರವರಿಗೆ ಆಗಿದ್ದ ಗಾಯಗಳಿಗೆ ಸಂಬಂಧಿಸಿದಂತೆ ಭಾ.ದಂ.ಸಂ ಕಲಂ 323 ರಲ್ಲಿ ಆರೋಪಪಟ್ಟಿಯಲ್ಲಿ ಸೇರಿಸಲಾಗಿದೆ. ಗಾಯದ ಪ್ರಮಾಣಪತ್ರ ನಿಪಿ 17 ರಲ್ಲಿ ನೋ ಟೆಂಡರ್ ನೆಸ್ ಇರುವುದಿಲ್ಲ ಎಂದು ಉಲ್ಲೇಖ ಇದೆ ಎಂದರೆ ಸರಿ. ವೈದ್ಯರ ಅಭಿಪ್ರಾಯದ ಆಧಾರದ ಮೇರೆಗೆ ನಾನು ಅವರಿಗೆ ಸಾಧಾ ಸ್ವರೂಪದ ಗಾಯವಾಗಿದೆ ಎಂದು ಆರೋಪಪಟ್ಟಿಯಲ್ಲಿ ಹೇಳಿದ್ದೇನೆ. ಚಾಸ 1 , 2 , 10 ರವರಿಗೆ ಸಹಾಯಮಾಡಲು ಸುಳ್ಳು ಆರೋಪಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಈ ದೂರನ್ನು ಎಷು ದಿನ ನಿಧಾನವಾಗಿ ಸಲ್ಲಿಸಲಾಗಿದೆ ಎಂದು ನಾನು ತಿಳಿದುಕೊಂಡಿಲ್ಲ.

4. ಸಗೂ ಈ ಪ್ರಕರಣಕ್ಕೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ನಾನು ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ ಎಂದು ನುಡಿಯುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿದೆ

**(ಮಂಜುಳಾ ಇಟ್ಟಿ)**

**5 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ**

**ನ್ಯಾಯಾಲಯ, ಮಂಡ್ಯ**